ಮೈಸೂರ ಗೆಜೆಟ್

ಸರ್ಕಾರದಿಂದ ಫಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಅಕ್ಟೋಬರ್ ತಾ॥ 11, ಸ್ರ್ 1884.

ಗಮನ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

3ನೇ ಭಾಗ.

ಇಂಡ್ಯಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರುವಗೈರೇರಿಂದ ಕೊಡೋಣಾದ ಇಸ್ತಿಹಾರ್ ನಾಮೆಗಳು.

ರೆಸಿಡೆಂಟರ ಇಲಾಖಾ.

ಇಸ್ತಿಹಾರ್ ನಾಮೆ.

ಫಿನ್ಯಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡಿ ಸಲ್ಲತಕ್ಕ ಬಗ್ಗೆ, ಪರಾ ಬರೆಯಲ್ಪಡಬಹುದಾದಂತಾ ಸದರೀ ಸಾಲಧ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನ್‌ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟ್ವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಷೇಸ್‌ಮೆಂಟ್ ಯಾನೇ ಪರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಷೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಪೆರ್